ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ತಪರಾಕಿ | ಒಂದು ತಿಂಗಳಲ್ಲಿ ಮೀಸಲು ಅಧಿಸೂಚನೆಗೆ ತಾಕೀತು

# ಈಗಿನಂತೇ ಬಿಬಿಎಂಪಿಗೆ ಚುನಾವಣೆ ನಡೆಸಿ

ಬೆಂಗಳೂರು: ಬಿಬಿಎಂಪಿ ಚುನಾವಣೆಯನ್ನು ಮುಂದೂಡಬೇಕು ಎಂದು ಯೋಚಿಸುತ್ತಿದ್ದ ರಾಜ್ಯ ಸರ್ಕಾರಕ್ಕೆ ಹಿನ್ನಡೆಯಾಗಿದೆ. ಈಗ ಇರುವ 198 ವಾರ್ಡ್‌ಗಳ ಪ್ರಕಾರವೇ ಶೀಘ್ರದಲ್ಲಿಯೇ ಚುನಾವಣೆ ನಡೆಸಬೇಕು ಎಂದು ಆದೇಶಿಸಿದೆ. ಅದಕ್ಕಾಗಿ ಇದೇ ವರ್ಷದ ಜ.23ರಂದು ಹೊರಡಿಸಿದ್ದ ಅಧಿಸೂಚನೆ ಪ್ರಕಾರವೇ ಒಂದು ತಿಂಗಳಲ್ಲಿ ಮೀಸಲು ಅಧಿಸೂಚನೆ ಹೊರಡಿಸಬೇಕೆಂದೂ ಸರ್ಕಾರಕ್ಕೆ ಆದೇಶ ನೀಡಿದೆ. ಮೀಸಲು ಅಧಿಸೂಚನೆ ಹೊರಡಿಸಿದ ಆರು ವಾರಗಳಲ್ಲಿ ಚುನಾವಣೆ ಅಧಿಸೂಚನೆ ಹೊರಡಿಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ ಹೈಕೋರ್ಟ್.

ಗ್ರಾ.ಪಂ.ಚುನಾವಣೆ ಮುಂದೂಡಲು ಯತ್ನಿಸಿ ಸೋಲು ಕಂಡಿರುವ ರಾಜ್ಯ ಸರ್ಕಾರಕ್ಕೆ ಇದು ಮತ್ತೊಂದು ಹಿನ್ನಡೆಯಾಗಿದೆ. ವಾರ್ಡ್‌ಗಳ ಸಂಖ್ಯೆ 243ಕ್ಕೆ ಹೆಚ್ಚಿಸಿ ಜಾರಿಗೆ ತಂದಿದ್ದ ಕಾಯ್ದೆಯನ್ನು ಬಿಬಿಎಂಪಿ ಚುನಾವಣೆಯನ್ನು ಮುಂದೂಡಲು ಅಸ್ತ್ರವನ್ನಾಗಿ ಮಾಡಿಕೊಂಡಿದ್ದ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ತೀರ್ಪಿನಿಂದ ನಿರಾಶೆಯಾಗಿದೆ. ಹೀಗಾಗಿ ಸದ್ಯ ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸುವುದೊಂದೆ ರಾಜ್ಯ ಸರ್ಕಾರದ ಮುಂದಿರುವ ಕಾನೂನು ಆಯ್ಕೆಯಾಗಿದೆ.

ಬಿಬಿಎಂಪಿಗೆ ಚುನಾವಣೆ ನಡೆಸುವಂತೆ ಸರ್ಕಾರ ಹಾಗೂ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಬೇಕು ಎಂದು ಪಾಲಿಕೆ ಮಾಜಿ ಸದಸ್ಯ ಎಂ. ಶಿವರಾಜ್ ಮತ್ತಿತರರು ಅರ್ಜಿ ಸಲ್ಲಿಸಿದ್ದರು. ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ್ ಮತ್ತು ನ್ಯಾ.ಎಸ್. ವಿಶ್ವಜಿತ್ ಶೆಟ್ಟಿ ನೇತೃತ್ವದ ವಿಭಾಗೀಯ ನ್ಯಾಯಪೀಠ ಅವುಗಳ ವಿಚಾರಣೆ ನಡೆಸಿ ತೀರ್ಪು ಕಾಯ್ದಿರಿಸಿತ್ತು. ಶುಕ್ರವಾರ ತೀರ್ಪು ಪ್ರಕಟವಾಗುವ ಮೂಲಕ ಹತ್ತು ತಿಂಗಳಿಂದ ಬಿಬಿಎಂಪಿ ಚುನಾವಣೆಗಾಗಿ ಕಾನೂನು ಸಮರ ಸದ್ಯಕ್ಕೆ ಮುಕ್ತಾಯವಾಗಿದೆ.

ಪ್ರಕರಣದ ಹಿನ್ನೆಲೆ: ಸೆ.10ಕ್ಕೆ ಅವಧಿ ಮುಗಿಯಲಿದ್ದ ಬಿಬಿಎಂಪಿಯ ವಾರ್ಡ್‌ವಾರು ಮೀಸಲಾತಿ ಹಾಗೂ ವಾರ್ಡ್ ಪುನರ್ ವಿಂಗಡಣೆ ಹೊರಡಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಲು ಕೋರಿ ರಾಜ್ಯ ಚುನಾವಣಾ ಆಯೋಗ ಜನವರಿಯಲ್ಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ▶ 2ನೇ ಪುಟಕ್ಕೆ



## ಹೈಕೋರ್ಟ್ ಹೇಳಿದ್ದೇನು?

- ಕರ್ನಾಟಕ ಮುನ್ಸಿಪಲ್ ಕಾಯ್ದೆ (ಮೂರನೇ ತಿದ್ದುಪಡಿ) ಕಾಯ್ದೆ-2020 ಸೂಕ್ತ. ಆದರ ಜಾರಿಗೆ ಮುಂಚೆ ಸಂವಿಧಾನದ ಕಲಂ 243 ಯು (3) (ಎ) ನಂತೆ ಚುನಾವಣೆ ನಡೆವ ಪಾಲಿಕೆಗೆ ಅನ್ವಯವಾಗುವುದಿಲ್ಲ.
- ತಿದ್ದುಪಡಿ ಕಾಯ್ದೆ ಪ್ರಕಾರ ಚುನಾವಣೆ ನಡೆಸಿದರೆ ಸಂವಿಧಾನದ ಕಲಂ 243ಯು (3) (ಎ) ಉಲ್ಲಂಘನೆಯಾಗುತ್ತದೆ.
- 1976ರ ಕಾಯ್ದೆಗೆ ತಂದಿರುವ ತಿದ್ದುಪಡಿಗಳು ಅ.3ಕ್ಕೆ ಅವಧಿ ಮುಗಿ ಪಾಲಿಕೆಗಳಿಗೆ ಮಾತ್ರ ಅನ್ವಯ.

## ಮುಂದೇನ ಹೆಜ್ಜೆ?

ಹೈಕೋರ್ಟ್ ಆದೇಶದಂತೆ ಚುನಾವಣೆ ನಡೆಸಲು ಮುಂದಾಗಬೇಕು, ಇಲ್ಲವೇ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು. ಈಗಿನ ಸ್ಥಿತಿ ಗಮನಿಸಿದರೆ ಮೇಲ್ಮನವಿ ಸಲ್ಲಿಸುವ ಸಾಧ್ಯತೆಗಳೇ ಹೆಚ್ಚಾಗಿವೆ.



ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಬಗ್ಗೆ ಪಕ್ಷದ ವೇದಿಕೆಯಲ್ಲಿ ಚರ್ಚಿಸುತ್ತೇವೆ. ಬಿಬಿಎಂಪಿಗೆ ಪ್ರತ್ಯೇಕ ಕಾಯ್ದೆ ಆಗಬೇಕು ಎನ್ನುವುದು ನಮ್ಮ ಬಯಕೆ. ಅದನ್ನು ನಮ್ಮ ಪ್ರಣಾಳಿಕೆಯಲ್ಲಿಯೇ ಹೇಳಿದ್ದೇವೆ. ಈ ಬಗ್ಗೆ ಪ್ರತಿಪಕ್ಷಗಳ ಜತೆ ಚರ್ಚಿಸುತ್ತೇವೆ.

– ಡಾ.ಸಿ.ಎನ್.ಅಶ್ವತ್ಥ ನಾರಾಯಣ, ಡಿಸಿಎಂ